# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 379+380

ಸದಸ್ಯರ ಹೆಸರು : ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವವರು : ಮಾನ್ಯ ಕಂದಾಯ, ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು

ಉತ್ತರಿಸಬೇಕಾದ ದಿನಾಂಕ : 12.12.2018

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| 1 | ಕೊಡಗು ಜಿಲ್ಲೆಯಲ್ಲಿ ಇತ್ತೀಚೆಗೆ ಸಂಭವಿಸಿದ ಪ್ರವಾಹ ಹಾಗೂ ಭೂ ಕುಸಿತದಿಂದ ಅಪಾರ ಪ್ರಮಾಣದಲ್ಲಿ ಆಸ್ತಿಪಾಸ್ತಿ ಹಾಗೂ ಪ್ರಾಣಹಾನಿ ಉಂಟಾಗಿ ಹಲವಾರು ಕುಟುಂಬಗಳು ಸಂತ್ರಸ್ತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ |
| 2 | ಬಂದಿದ್ದಲ್ಲಿ, ಈ ರೀತಿ ಅತ್ಯಂತ ಸಂಕಷ್ಟಕ್ಕೀಡಾಗಿರುವ ಕುಟುಂಬಗಳನ್ನು BPL ವ್ಯಾಪ್ತಿಗೆ ತಂದು ಸದರಿ ಕುಟುಂಬಗಳು ಹೊಂದಿರುವ ಸಾಲಗಳನ್ನು ಸಂಪೂರ್ಣ ಮನ್ನಾ ಮಾಡಲು ಸರ್ಕಾರ ತುರ್ತು ಕ್ರಮ ತೆಗೆದುಕೊಳ್ಳುವುದೇ; | ಇಂತಹ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |
| 3 | ಜಿಲ್ಲೆಯಲ್ಲಿ ಮನೆ ಕಳೆದುಕೊಂಡಿರುವ ಕುಟುಂಬಗಳ ಸಂಖ್ಯೆ ಎಷ್ಟು; | ಪ್ರವಾಹದಿಂದಾಗಿ 840 ಕುಟುಂಗಳು ಮನೆ ಕಳೆದುಕೊಂಡಿರುತ್ತಾರೆ. |
| 4 | ಸದರಿ ಸಂತ್ರಸ್ತರಿಗೆ ಮನೆ ನಿರ್ಮಾಣ ಮಾಡಿ ಕೊಡಲು ಇದುವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಪ್ರವಾಹ ಸಂತ್ರಸ್ತರಿಗೆ ಪುನರ್ ವಸತಿ ಕಲ್ಪಿಸುವುದಕ್ಕಾಗಿ ಪ್ರತೀ ಮನೆಗೆ ರೂ.9.85 ಲಕ್ಷಗಳ ಅಂದಾಜು ವೆಚ್ಚದಲ್ಲಿ ಒಟ್ಟು 840 ಮನೆಗಳನ್ನು ಕರ್ನಾಟಕ ಹ್ಯಾಬಿಟೇಟ್ ಕೇಂದ್ರದ ಮೂಲಕ ನಿರ್ಮಾಣ ಮಾಡಲು ವಸತಿ ಇಲಾಖೆಯ ಮೂಲಕ ರೂ.82.74 ಕೋಟಿಗಳನ್ನು ಮಂಜೂರಾತಿ ನೀಡಲಾಗಿದೆ. |
| 5 | ಯಾವ ಕಾಲಮಿತಿಯೊಳಗೆ ಈ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುವುದು? | ಆದಷ್ಟು ಶೀಘ್ರವಾಗಿ ಕ್ರಮವಹಿಸಲಾಗುವುದು. |

ಕಂಇ 280 ಟಿಎನ್ಆರ್ 2018

(ಆರ್.ವಿ. ದೇಶಪಾಂಡೆ)
ಕಂದಾಯ, ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು